# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 125(822)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು

ವಿಷಯ : ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಕುರಿತು

(ಅ) ರಾಜ್ಯದ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರವು ರೂಪಿಸಿರುವ ಯೋಜನೆಗಳು ಯಾವುವು; ಕಳೆದ 3 ವರ್ಷಗಳಲ್ಲಿ ಈ ಯೋಜನೆಗಳಡಿ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಸ್ಥಾಪನೆಯಾದ ಸಣ್ಣ ಕೈಗಾರಿಕೆಗಳೆಷ್ಟು; (ಆದೇಶದ ಪ್ರತಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಆ) ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಯಾವ ಯಾವ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಅವಕಾಶಗಳಿವೆ ಮತ್ತು ಸಣ್ಣ ಕೈಗಾರಿಕೆಗಳ ಒಂದು ಕೈಗಾರಿಕಾ ಪ್ರದೇಶ ಸ್ಥಾಪಿಸಲು ಇರುವಂತಹ ಮಾನದಂಡಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದವರು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದ ವತಿಯಿಂದ ಯಾವ ಯಾವ ಯೋಜನೆಗಳನ್ನು ರೂಪಿಸಿ ಸಾಲ ಸೌಲಭ್ಯ, ಸಹಾಯ ಧನ ನೀಡಲಾಗುತ್ತಿದೆ? (ಸಂಪೂರ್ಣ ವಿವರ ನೀಡುವುದು)